ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಕುಡಿಯುವ ನೀರಿನ ಸರಬರಾಜು

2583(3173) ಶ್ರೀ ಹೊನ್ನಳ್ಳೀ ಜಬ್ಬಾರ್‌ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರದ ಮಹಾಜನತೆಗೆ ಮಲಪ್ರಭಾ 3ನೇ ಹಂತದ ನೀರು ಸರಬರಾಜು ಮಾಡುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

ಆ) ಮಲಪ್ರಭಾ 3ನೇ ಹಂತದ ಕುಡಿಯುವ ನೀರಿನ ಯೋನೆಗೆ ತಗಲುವ ಅಂದಾಜು ವೆಚ್ಚವೆಷ್ಟು;

ಇ) ಸದರಿ ಯೋಜನೆಗೆ ಸರ್ಕಾರ ಮಂಜೂರಾತಿ ನೀಡಿದೆಯೇ;

ಈ) ಈ ಕುಡಿಯುವ ನೀರಿನ ಯೋಜನೆ ಪ್ರಾರಂಭಿಸುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಸರ್ಕಾರದ ಗಮನದಲ್ಲಿದೆ.

ಆ) ಮಲಪ್ರಭಾ 3ನೇ ಹಂತದ ಕುಡಿಯುವ ನೀರಿನ ಯೋಜನೆಗೆ ತಗಲುವ ಅಂದಾಜು ವೆಚ್ಚ ರೂ. 144.04 ಕೋಟಿಗಳು.

ಇ) ಸರ್ಕಾರಥ ಪರಿಶೀಲನೆಯಲ್ಲಿದೆ.

ಈ) ಸದರಿ ಯೋಜನೆಯು ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಹಳೆ ಹುಬ್ಬಳ್ಳಿಯಲ್ಲಿ ಸಿಟಿ ಬಸ್ ನಿಲ್ದಾಣ

2584(3174) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಳೇ ಹುಬ್ಬಳ್ಳಿಯ ಇಂಡಿಪಂಪ ಹತ್ತಿರ ಹೆಗ್ಗೇರಿ ಕಾಲೋನಿಯಲ್ಲಿ ಸಿಟಿ ಬಸ್ ನಿಲ್ದಾಣ ನಿರ್ಮಾಣ ಮಾಡುವ ಕೆಲಸ ಕಾರ್ಯ ವಿಳಂಬವಾಗಿರುವುದಕ್ಕೆ ಕಾರಣವೇನು;

ಆ) ಅಲ್ಲಿ ಸಿಟಿ ಬಸ್ ನಿಲ್ದಾಣ ನಿರ್ಮಾಣ ಮಾಡಲಿಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು; ಈಗಾಗಲೇ ಹಣ ಬಿಡುಗಡೆ ಮಾಡಿದ ಮೊತ್ತ ಎಷ್ಟು;

ಇ) ಸಿಟಿ ಬಸ್ ನಿಲ್ದಾಣ ಕೆಲಸಕ್ಕೆ ಶಂಕುಸ್ಥಾಪನೆ ಮಾಡುವ ದಿನಾಂಕ ನಿಗದಿ ಮಾಡಲಾಗಿದೆಯೇ; ಇಲ್ಲವಾದಲ್ಲಿ, ಕಾರಣವೇನು?

ಶ್ರೀ ರಮಾನಾಥ ರೈ (ಸಾರಿಗೆ ಸಚಿವರು) :

ಅ) ಸದರಿ ಬಸ್ ನಿಲ್ದಾಣದ ನಿವೇಶನವು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸ್ವಾಧೀನದಲ್ಲಿರುವ ಒಂದು ಎಕರೆ 12 ಗುಂಟೆ ನಿವೇಶನವನ್ನು ಪ್ರತಿ ವರ್ಷಕ್ಕೆ ರೂ. 3,75,000.00ಗಳಂತೆ ಮೂರು ವರ್ಷದ ಅವಧಿಗೆ ಮಾತ್ರ ಭೂ ಬಾಡಿಗೆ ಆಧಾರದ ಮೇಲೆ ನೀಡುವುದಾಗಿ ಹುಬ್ಬಳ್ಳಿ-ಧಾರವಾಡ ಮಹಾನಗರಪಾಲಿಕೆ ಆಯುಕ್ತರು ತಿಳಿಸಿರುತ್ತಾರೆ. ಆದರೆ, ಸದರಿ ನಿವೇಶನವನ್ನ ಸಂಸ್ಥೆಗೆ ಖರೀದಿಗೆ ನೀಡುವಂತೆ ಆಯುಕ್ತರು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ, ಹುಬ್ಬಳ್ಳಿ ಅವರನ್ನು ಕೋರಲಾಗಿದ್ದು, ಪತ್ರವ್ಯವಹಾರದಲ್ಲಿರುತ್ತದೆ.

ಆ) ನಿವೇಶನವನ್ನು ಸಂಸ್ಥೆಯ ವಶಕ್ಕೆ ತೆಗೆದುಕೊಂಡ ಕೂಡಲೇ ಅಂದಾಜು ಪಟ್ಟಿಯನ್ನು ತಯಾರಿಸಲಾಗುವುದು.

ಇ) ಉದ್ಭವಿಸುವುದಿಲ್ಲ.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ಅಪಘಾತ ವಿಮೆ

2586(3406) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ದೂರದ ಊರುಗಳಿಗೆ ಸಂಚರಿಸುವ ಪ್ರಯಾಣಿಕರಿಂದ ಅಪಘಾತ ವಿಮೆಯ ವಸೂಲಿ ಮಾಡುತ್ತಿರುವುದು ನಿಜವೇ;

ಆ) ಹಾಗಿದ್ದರೆ, ಪ್ರತಿಯೊಬ್ಬ ಪ್ರಯಾಣಿಕನಿಂದ ಎಷ್ಟು ಹಣವನ್ನು ವಸೂಲಿ ಮಾಡಲಾಗುತ್ತಿದೆ;

ಇ) ಈವರೆಗೂ ಎಷ್ಟು ಹಣವನ್ನು ವಸೂಲಿ ಮಾಡಲಾಗಿದೆ.

ಈ) ಈ ರೀತಿ ವಸೂಲಿ ಮಾಡಿದ ಹಣದಲ್ಲಿ ಅಪಘಾತಕ್ಕೊಳಗಾದವರಿಗೆ ಎಷ್ಟು ಹಣವನ್ನು ನೀಡಲಾಗಿದೆ; ವಿವರ ನೀಡುವುದು?

ಶ್ರೀ ಬಿ. ರಮಾನಾಥ(ಸಾರಿಗೆಸಚಿವರು) :

ಅ) ಹೌದು

ಆ) ಸರ್ಕಾರದ ಆದೇಶ ಸಂಖ್ಯೆ, ಒಸಾಇ 308 ಟಿಆರ್‌ಇ 2001 ದಿನಾಂಕ: 24-04-2002ರ ಪ್ರಕಾರ ದಿನಾಂಕ: 01-06-2002ರಿಂದ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ರೂ. 20/- ಹಾಗೂ ಅದರ ಮೇಲ್ಪಟ್ಟು ಮೊತ್ತದ ಟಿಕೇಟುಗಳನ್ನು ಖರೀದಿಸುವ ಪ್ರಯಾಣಿಕರಿಂದ ಅಪಘಾತ ಪರಿಹಾರ ನಿಧಿಯ ವಂತಿಗೆ ರೂ. 1/-ನ್ನು ವಸೂಲಿ ಮಾಡಲಾಗುತ್ತಿತ್ತು. ನಂತರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಮಂಡಳಿ ತೆಗೆದುಕೊಂಡ ತೀರ್ಮಾನದ ಪ್ರಕಾರ ದಿನಾಂಕ: 12-6-2003 ರಿಂದ ರೂ. 40/- ಹಾಗೂ ಅದರ ಮೇಲ್ಪಟ್ಟು ಮೊತ್ತದ ಟಿಕೇಟುಗಳನ್ನು ಖರೀದಿಸುವ ಪ್ರಯಾಣಿಕರಿಂದ ರೂ. 1/-ನ್ನು ವಸೂಲಿ ಮಾಡಲಾಗುತ್ತಿದೆ.

ಇ) ಜೂನ್-03ರವರೆಗೆ ಒಟ್ಟು 821 ಲಕ್ಷ ರೂ.ಗಳು ಅಪಘಾತ ಪರಿಹಾರ ನಿಧಿಗೆ ಸಂಗ್ರಹವಾಗಿರುತ್ತದೆ.

ಈ) ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಾಗ ಅಪಘಾತದಿಂದ ಮೃತ ಪ್ರಯಾಣಿಕರ ಹತ್ತಿರದ ವಾರಸುದಾರರಿಗೆ ಒಂದು ಲಕ್ಷ ರೂ.ಗಳ ಪರಿಹಾರವನ್ನು ನೀಡಲಾಗುತ್ತಿದೆ. 19 ಜನ ಮೃತಪಟ್ಟಿದ್ದು, ಎಲ್ಲಾ ಮೃತರ ಹತ್ತಿರದ ಸಂಬಂಧಿಗಳಿಗೆ ಪರಿಹಾರ ವಿತರಿಸಲಾಗಿದೆ. ವಿವರಣಾ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಪಘಾತಗಳಿಂದ ತೀವ್ರವಾಗಿ ಗಾಯಗೊಂಡ ಪ್ರಯಾಣಿಕರಿಗೆ ಪರಿಹಾರ ನೀಡಲು ಅಪಘಾತ ಪರಿಹಾರ ನಿಧಿಯ ವ್ಯಾಪ್ತಿಗೆ ಒಳಪಡಿಸುವ ಬಗ್ಗೆ ಪ್ರಸ್ತಾವನೆ ದಿನಾಂಕ: 4-7-2003ರಲ್ಲಿ ಬಂದಿದ್ದು, ಅದನ್ನು ಪರಿಶೀಲಿಸಲಾಗುತ್ತಿದೆ.